ಕರ್ನಾಟಕ ಸರ್ಕಾರ

ತಾಂತ್ರಿಕ ಶಿಕ್ಷಣ ಇಲಾಖೆ

ಸಂಖ್ಯೆ:ಬಿಟಿಇ/03/ಇಸಿಎಸ್(3)/2015

ಕಾರ್ಯದರ್ಶಿಯವರ ಕಛೇರಿ
ತಾಂತ್ರಿಕ ಪರೀಕ್ಷಾ ಮಂಡಳಿ
ಅರಮನೆ ರಸ್ತೆ, ಬೆಂಗಳೂರು-1,
ದಿನಾಂಕ:13-06-2017

## ಸುತ್ತೋಲೆ

ವಿಷಯ: ತಾಂತ್ರಿಕ ಪರೀಕ್ಷಾ ಮಂಡಳಿಯಿಂದ ಸಂಯೋಜನೆ ಪಡೆಯಲು ಶುಲ್ಕ ಪಾವತಿಸಿರುವ ರಸೀದಿ ಮತ್ತು ಇತರೆ ದಾಖಲೆಗಳನ್ನು ಸಲ್ಲಿಸುವ ಬಗ್ಗೆ.

ಉಲ್ಲೇಖ: ಈ ಕಛೇರಿ ಸುತ್ತೋಲೆ ಸಂಖ್ಯೆ: ಬಿಟಿಇ/03/ಇಸಿಎಸ್(3)/2015 ದಿ:03-06-2017

***********

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ ಅನುದಾನಿತ ಹಾಗೂ ಖಾಸಗಿ ಪಾಲಿಟೆಕ್ನಿಕ್ ಸಂಸ್ಥೆಗಳು 2014-15, 2015-16 ಮತ್ತು 2016-17 ನೇ ಸಾಲುಗಳಲ್ಲಿ ತಾಂತ್ರಿಕ ಪರೀಕ್ಷಾ ಮಂಡಳಿಯಿಂದ ಸಂಯೋಜನೆ ಪಡೆಯಲು ಸಂಯೋಜನಾ ಶುಲ್ಕ ಪಾವತಿಸಿರುವ ಕುರಿತು ಮೂಲ ರಸೀದಿ ಮತ್ತು ಎ.ಐ.ಸಿ.ಟಿ.ಇ. ಅನುಮೋದನೆ ಹಾಗೂ ರಾಜ್ಯ ಸರ್ಕಾರದ ಅನುಮೋದನೆ ಪಡೆದಿರುವ ಪತ್ರಗಳ ಪ್ರತಿಗಳನ್ನು ಮಂಡಳಿಗೆ ಸಲ್ಲಿಸಲು ಉಲ್ಲೇಖದ ಸುತ್ತೋಲೆಯಲ್ಲಿ ಅಂತಿಮ ಗಡುವು ನೀಡಲಾಗಿತ್ತು. ಆದಾಗ್ಯೂ ಕೆಲವು ಸಂಸ್ಥೆಗಳು ಸದರಿ ದಾಖಲೆಗಳನ್ನು ಇದುವರೆವಿಗೂ ಸಲ್ಲಿಸಿರುವುದಿಲ್ಲ.

ಪ್ರಯುಕ್ತ ಕಟ್ಟ ಕಡೆಯ ಅವಕಾಶವಾಗಿ ದಿನಾಂಕ:17-06-2017 ರೊಳಗೆ ಈ ಕೆಳಕಂಡ ಸಂಸ್ಥೆಗಳು ಅಗತ್ಯ ದಾಖಲೆಗಳನ್ನು ಸಲ್ಲಿಸಲು ಕಾಲಾವಕಾಶ ನೀಡಲಾಗಿದೆ. ತಪ್ಪಿದ್ದಲ್ಲಿ ಸದ್ಯದಲ್ಲೇ ಪ್ರಕಟಗೊಳ್ಳಲಿರುವ 2017 ಏಪ್ರಿಲ್/ಮೇ ಪರೀಕ್ಷೆಯ ಫಲಿತಾಂಶಗಳಲ್ಲಿ ಸದರಿ ಸಂಸ್ಥೆಗಳ ಫಲಿತಾಂಶವನ್ನು ತಡೆಹಿಡಿಯಲಾಗುವುದು ಎಂದು ಎಚ್ಚರಿಕೆ ನೀಡಲಾಗಿದೆ ಹಾಗೂ ಮುಂದಿನ ಆಗುಹೋಗುಗಳಿಗೆ ಸಂಸ್ಥೆಯ ಆಡಳಿತ ಮಂಡಳಿ/ಪ್ರಿನ್ಸಿಪಾಲರು ಹೊಣೆಗಾರರಾಗಿರುತ್ತಾರೆಂದು ತಿಳಿಸಲಾಗಿದೆ.

| | | | | | | | | | | | | |
|---|---|---|---|---|---|---|---|---|---|---|---|---|
| 306 | 307 | 313 | 314 | 368 | 383 | 394 | 401 | 402 | 430 | 451 | 453 | 455 |
| 458 | 464 | 467 | 468 | 469 | 498 | 509 | 513 | 518 | 522 | 526 | 535 | 538 |
| 539 | 543 | 545 | 550 | 551 | 553 | 560 | 561 | 566 | 570 | 580 | 583 | 584 |
| 585 | 588 | 590 | 593 | | | | | | | | | |

ಕಾರ್ಯದರ್ಶಿ

ಇವರಿಗೆ,
ಮೇಲ್ಕಂಡ ಅನುದಾನಿತ ಮತ್ತು ಖಾಸಗಿ ಪಾಲಿಟೆಕ್ನಿಕ್ ಪ್ರಿನ್ಸಿಪಾಲರುಗಳಿಗೆ – ಮಾಹಿತಿ ಮತ್ತು ಮುಂದಿನ ಕ್ರಮಕ್ಕಾಗಿ

ಪ್ರತಿ:
1. ಗಣಕ ಕೇಂದ್ರ – ವೆಬ್‌ಪೋರ್ಟಲ್‌ನಲ್ಲಿ ಪ್ರಕಟಿಸಲು
2. ಇ ಆಡಳಿತ – ವೆಬ್‌ಸೈಟ್‌ನಲ್ಲಿ ಪ್ರಕಟಿಸಲು